ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಗಂಗಾ ಕಲ್ಯಾಣ ಯೋಜನೆಯ ಕೊಳವೆಬಾವಿಗಳಿಗೆ ವಿದ್ಯುದೀಕರಣ ಮೂಲ ಸೌಕರ್ಯ ಕಲ್ಪಿಸಲು ವಿದ್ಯುತ್ ಸರಬರಾಜು ಕಂಪನಿ(ವಿಸಂಕ)ಗಳಿಗೆ ಬಿಡುಗಡೆಗೊಳಿಸಲಾಗುತ್ತಿರುವ ಮೊತ್ತವನ್ನು ರೂ.50.000 ಗಳಿಂದ ರೂ.75.000ಗಳಿಗೆ ಹೆಚ್ಚಿಸುವ ಬಗ್ಗೆ.

EMC-1

ಉಲ್ಲೇಖ: 1)ಸರ್ಕಾರದ ಪತ್ರ ಸಂಖ್ಯೆ:M.W.D 90 MDC 2017 ದಿನಾಂಕ:30/06/2017

2)ಇಂಧನ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಎನರ್ಜಿ 42 ವಿಎಸ್ ಸಿ 2022 ದಿನಾಂಕ;27/01/2022

DTJ

**ಪ್ರಸ್ತಾವನೆ:**

JD EMC-I

ಮೇಲೆ ಓದಲಾದ ಕ್ರಮ ಸಂಖ್ಯೆ(1) ರಲ್ಲಿನ ಸರ್ಕಾರದ ಪತ್ರದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ಗಂಗಾ ಕಲ್ಯಾಣ ಯೋಜನೆಯ ಪ್ರತಿ ಕೊಳವೆ ಬಾವಿಗಳಿಗೆ ಮೂಲ ಸೌಕರ್ಯ ಕಲ್ಪಿಸಲು ವಿದ್ಯುದೀಕರಣಗೊಳಿಸಲು ತಲಾ.ರೂ 50.000 (ಐವತ್ತು ಸಾವಿರ ರೂಪಾಯಿಗಳು) ಗಳನ್ನು ಆಯಾ ವಿದ್ಯುತ್ ಸರಬರಾಜು ಕಂಪನಿ(ವಿಸಂಕ)ಗಳಿಗೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದಿಂದ ಬಿಡುಗಡೆಗೊಳಿಸಲು ಸರ್ಕಾರದ ಅನುಮತಿಯನ್ನುನೀಡಲಾಗಿರುತ್ತದೆ.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂದನ ಇಲಾಖೆ ಇವರುಗಳ ಸಹ ಅಧ್ಯಕ್ಷತೆಯಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೊರೆಯಲಾಗುವ ಕೊಳವೆ ಬಾವಿಗಳ ವಿದ್ಯುದೀಕರಣ ವೆಚ್ಚವನ್ನು ಪರಿಷ್ಕರಿಸುವ ಕುರಿತು ದಿನಾಂಕ:10/01/2022 ರಂದು ನಡೆದ ಸಭೆಯಲ್ಲಿ ವಿದ್ಯುತ್ ಸರಬರಾಜು ಕಂಪನಿಗಳ ಕೋರಿಕೆಯ ಹಿನ್ನೆಲೆಯಲ್ಲಿ, ಗಂಗಾ ಕಲ್ಯಾಣ ಯೋಜನೆಯಡಿ ಕೊರೆಯಾಲಾಗುವ ಕೊಳವೆಬಾವಿಗಳಿಗೆ ಅಭಿವೃದ್ಧಿ ನಿಗಮಗಳ ವತಿಯಿಂದ ಬಿಡುಗಡೆಗೊಳಿಸಲಾಗುತ್ತಿರುವ ರೂ.50.000 ಗಳ ಮೂಲ ಸೌಕರ್ಯ ವಿದ್ಯುದೀಕರಣ ವೆಚ್ಚವನ್ನು ರೂ.75.000 ಗಳಿಗೆ ಹೆಚ್ಚಿಸಲು ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಒಮ್ಮತದಲ್ಲಿ ನಿರ್ಧಾರವನ್ನು ಕೈಗೊಳ್ಳಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿನ ಇಂಧನ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಕೊಳವೆ ಬಾವಿಗಳಿಗೆ ಅಭಿವೃದ್ಧಿ ನಿಗಮಗಳ ವತಿಯಿಂದ ಬಿಡುಗಡೆಗೊಳಿಸಲಾಗುತ್ತಿರುವ ರೂ.50.000 ಗಳ ಮೂಲ ಸೌಕರ್ಯ ವಿದ್ಯುದೀಕರಣ ವೆಚ್ಚವನ್ನು ರೂ.75.000 ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸುವಂತೆ ಇಂಧನ ಇಲಾಖೆಯು ಕೋರಿರುತ್ತದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿರುತ್ತದೆ.

**ಸರ್ಕಾರದ ಆದೇಶ ಸಂಖ್ಯೆ:M.W.D 05 MDC 2022 ದಿನಾಂಕ: 07/01/2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ ಇವರುಗಳ ಸಹ ಅಧ್ಯಕ್ಷತೆಯಲ್ಲಿ ದಿನಾಂಕ:10/01/2022 ರಂದು ನಡೆದ ಸಭೆಯಲ್ಲಿ ಕೈಗೊಂಡ ನಿರ್ಣಯದಂತೆ, ಗಂಗಾ ಕಲ್ಯಾಣ ಯೋಜನೆಯಡಿ ಕೊರೆಯಾಲಾಗುವ ಕೊಳವೆಬಾವಿಗಳಿಗೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದವತಿಯಿಂದ ವಿದ್ಯುತ್ ಸರಬರಾಜು ಕಂಪನಿ (ವಿಸಂಕ) ಗಳಿಗೆ ಬಿಡುಗಡೆಗೊಳಿಸಲಾಗುತ್ತಿರುವ ರೂ.50.000 (ಐವತ್ತು ಸಾವಿರ ರೂಪಾಯಿಗಳು) ಗಳ ಮೂಲ ಸೌಕರ್ಯ ವಿದ್ಯುದೀಕರಣ ವೆಚ್ಚವನ್ನು ರೂ.75.000 (ಎಪ್ಪತ್ತೈದು ಸಾವಿರ ರೂಪಾಯಿಗಳು) ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಹಿಬೂಬ ಸಾಬ)
ಸರ್ಕಾರದ ಉಪ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ

ಗೆ,

1) ಮಹಾಲೇಖ ಪಾಲರು,(ಎ & ಇ, ಲೆಕ್ಕಪರಿಶೋಧನೆ-1,2) ಕರ್ನಾಟಕ, ಬೆಂಗಳೂರು.

2)ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು-01

--3

ಕರ್ನಾಟಕ ಸರ್ಕಾರ

ಸಂಖ್ಯೆ: MWD 05 MDC 2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು,ದಿನಾಂಕ:23-02-2022.

## ತಿದ್ದುಪಡಿ ಆದೇಶ

ಸರ್ಕಾರದ ಆದೇಶ ಸಂಖ್ಯೆ:ಎಂಡಬ್ಲ್ಯೂಡಿ 05 ಎಂಡಿಸಿ 2022, ದಿನಾಂಕ: 07.01.2022 ರಲ್ಲಿನ ಸರ್ಕಾರದ ಆದೇಶದ **ದಿನಾಂಕ: 07.01.2022 ರ ಬದಲಿಗೆ ದಿನಾಂಕ: 07.02.2022** ಎಂದು ತಿದ್ದಿಕೊಂಡು ಓದಿಕೊಳ್ಳತಕ್ಕದ್ದು. ಉಳಿದಂತೆ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮಹಿಬೂಬ ಸಾಬ)
ಸರ್ಕಾರದ ಉಪ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ

ಗೆ,

1. ಮಹಾಲೇಖಪಾಲರು, (ಎ & ಇ, ಲೆಕ್ಕಪರಿಶೋಧನೆ-1,2), ಕರ್ನಾಟಕ, ಬೆಂಗಳೂರು
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರುಗಳು, ರಾಜ್ಯದ ಎಲ್ಲಾ ವಿಭಾಗದ ವಿದ್ಯುತ್ ಸರಬರಾಜು ಕಂಪನಿಗಳು
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಸಮನ್ವಯಾಧಿಕಾರಿ, ಸಹಾಯವಾಣಿ ಕೇಂದ್ರ (24X7), ವಸಂತನಗರ, ಬೆಂಗಳೂರು.
8. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ

E/VL/TP

3) ವ್ಯವಸ್ಥಾಪಕ ನಿರ್ದೇಶಕರುಗಳು, ರಾಜ್ಯದ ಎಲ್ಲಾ ವಿಭಾಗದ ವಿದ್ಯುತ್ ಸರಬರಾಜು ಕಂಪನಿಗಳು

4) ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ,ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.

6) ಸರ್ಕಾರದ ಕಾರ್ಯದರ್ಶಿಯವರ ಅಪ್ತ ಕಾರ್ಯದರ್ಶಿ. ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ,ಬೆಂಗಳೂರು

7) ಸಮನ್ವಯಾಧಿಕಾರಿ, ಸಹಾಯ ವಾಣಿ ಕೇಂದ್ರ(24*7) ವಸಂತ ನಗರ, ಬೆಂಗಳೂರು

8) ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿ

**ಮೆಮೋ: ಪ್ರವ್ಯ(ತಾ)/ಉಪ್ರವ್ಯ(ತಾ)/ಸಪ್ರವ್ಯ(ತಾ)-1/ವ್ಯ(ತಾ)-1/2023-24**/ CYS-726 **ದಿನಾಂಕ:** 02 SEP 2023

**ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ**

1. ಮುಖ್ಯ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನಾ ವಲಯ, ಚಾ.ವಿ.ಸ.ನಿ.ನಿ., ಮೈಸೂರು/ಹಾಸನ.
2. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ), ಚಾವಿಸನಿನಿ, ಕಾರ್ಯ ಮತ್ತು ಪಾಲನಾ ವೃತ್ತ,
3. ಉಪ ಪ್ರಧಾನ ವ್ಯವಸ್ಥಾಪಕರು,(ಎಂ.ಐ.ಎಸ್), ನಿಗಮ ಕಛೇರಿ, ಚಾವಿಸನಿನಿ, ಮೈಸೂರು ನಿಗಮದ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
4. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಚಾವಿಸನಿನಿ, ಕಾರ್ಯ ಮತ್ತು ಪಾಲನಾ ವಿಭಾಗ,
5. ಆಪ್ತ ಸಹಾಯಕರು ವ್ಯವಸ್ಥಾಪಕ ನಿರ್ದೇಶಕರು/ತಾಂತ್ರಿಕ ಸಹಾಯಕರು ನಿರ್ದೇಶಕರು(ತಾಂತ್ರಿಕ)ಇವರ ಗಮನಕ್ಕೆ.

ಮುಖ್ಯ ಕಡತ/ಕ.ಪ್ರ.

ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ),
ಚಾವಿಸನಿನಿ, ಮೈಸೂರು.